ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 9/4/21

ಲಾ) 9-4-2021

# ಓಲೇಕಾರ್ ಅರ್ಹತೆ ನಿರ್ಧಾರ ಹೇಗೆ?

ಬೆಂಗಳೂರು: ರಾಜ್ಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷ ಸ್ಥಾನಕ್ಕೆ ನೇಮಕಗೊಂಡಿರುವ ಶಾಸಕ ನೆಹರು ಓಲೇಕಾರ್‌ಗೆ ಎಸ್‌ಸಿ, ಎಸ್‌ಟಿ ವರ್ಗಗಳ ಬಗ್ಗೆ ವಿಶೇಷ ಜ್ಞಾನವಿದೆ ಎಂದು ಹೇಗೆ ನಿರ್ಧರಿಸಲಾಗಿದೆ ಎಂಬ ವಿವರಣೆ ನೀಡುವಂತೆ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ. ಕೋಲಾರದ ಸಾಮಾಜಿಕ ಕಾರ್ಯಕರ್ತ ಕೆ.ಸಿ.ರಾಜಣ್ಣ ಸಲ್ಲಿಸಿರುವ ಅರ್ಜಿಯನ್ನು ಗುರುವಾರ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ನೇತೃತ್ವದ ವಿಭಾಗೀಯ ಪೀಠ ಈ ನಿರ್ದೇಶನ ನೀಡಿತು. ಸರ್ಕಾರದ ಪರ ವಕೀಲರು ಸಲ್ಲಿಸಿದ ನೇಮಕಾತಿ ಕುರಿತ ಕಡತ ಪರಿಶೀಲಿಸಿದ ಪೀಠ, ಸಿಎಂ ಆದೇಶ ಹೊರತುಪಡಿಸಿ ಬೇರೆ ಯಾವ ದಾಖಲೆಯೂ ಕಡತದಲ್ಲಿಲ್ಲ. ಕಾಯ್ದೆ ಪ್ರಕಾರ ಎಸ್‌ಸಿ, ಎಸ್‌ಟಿ ವರ್ಗಗಳ ಬಗ್ಗೆ ವಿಶೇಷ ಜ್ಞಾನ ಹೊಂದಿರುವವರನ್ನು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಬೇಕು. ನೆಹರು ಓಲೇಕಾರ್‌ಗೆ ಆ ವಿಶೇಷ ಜ್ಞಾನವಿದೆ ಎಂದು ಯಾರು, ಹೇಗೆ ನಿರ್ಧರಿಸಿದರು ಎಂದು ಪ್ರಶ್ನಿಸಿತು. ಅಲ್ಲದೆ, ಈ ಕುರಿತು ವಿವರಣೆ ನೀಡುವಂತೆ ಸರ್ಕಾರದ ಪರ ವಕೀಲರಿಗೆ ಸೂಚಿಸಿ, ಮೇ 28ಕ್ಕೆ ವಿಚಾರಣೆ ಮುಂದೂಡಿತು.



**ಸರ್ಕಾರದಿಂದ ವಿವರಣೆ ಕೇಳಿದ ಹೈಕೋರ್ಟ್**